**ಮೂರನೇ ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ರವರ**
**ನ್ಯಾಯಾಲಯ, ಕನಕಪುರ**

**<u>ಸಿ.ಸಿ ನಂ. 1456/2023</u>**

ದಿನಾಂಕಃ. **19.02.2026.** ರಂದು ಸಾಕ್ಷಿಗೆ ಮದ್ಯಾಹ್ನ **3.30** ಗಂಟೆಗೆ ಪ್ರಮಾಣ ವಚನ ಭೋದಿಸಲಾಯಿತು.

| ಚಾಸಾ-**12** | ಪ್ರಾಸಾ**4** |
|---|---|
| ಹೆಸರು | - ಪ್ರಭುಸ್ವಾಮಿ |
| ತಂದೆ ಹೆಸರು | - ಲೇಟ್ ವೀರಭದ್ರಪ್ಪ |
| ವಯಸ್ಸು | - **63** |
| ಉದ್ಯೋಗ | - ನಿವೃತ್ತ ಎ.ಎಸ್.ಐ |
| ವಿಳಾಸ | - ಹಾರೋಹಳ್ಳಿ |

**<u>ಮುಖ್ಯವಿಚಾರಣೆ : ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರಿಂದಃ-</u>**

ದಿನಾಂಕಃ **19.05.2018** ರಂದು ಸಂಜೆ **7-30** ಗಂಟೆಗೆ ಚಾ.ಸಾ. **1** ರವರು ಠಾಣೆಗೆ ಹಾಜರಾಗಿ ಅವರ ತಂದೆಗೆ ಅಪಘಾತವಾಗಿದೆ ಎಂದು ಹೇಳಿ ಒಂದು ದೂರನ್ನು ನೀಡಿದರು. ನಾನು ಅದನ್ನು ಸ್ವೀಕರಿಸಿಕೊಂಡು ಠಾಣಾ ಅಪರಾಧ ಸಂಖ್ಯೆಃ **99/2018** ಎಂದು ದಾಖಲಿಸಿಕೊಂಡು ಪ್ರಥಮ ವರ್ತಮಾನ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಿದೆ. ನಂತರ ಕಡತವನ್ನು ಮುಂದಿನ ತನಿಖೆಗಾಗಿ ಚಾ.ಸಾ. **13** ರವರಿಗೆ ಕೊಟ್ಟೆ.

ಸಾಕ್ಷಿ ಒಂದು ದೂರನ್ನು ನೋಡಿ ಅದರಲ್ಲಿರುವ ಒಂದು ಸಹಿಯನ್ನು ನೋಡಿ ತನ್ನ ಸಹಿ ಮತ್ತು ಸದರಿ ದೂರು ಎಂದು ಗುರುತಿಸಿದ್ದು, ಸದರಿ ಈಗಾಗಲೇ **ದೂರನ್ನು** ನಿಪಿ-**1** ಎಂದು, ಸಾಕ್ಷಿ ಸಹಿಯನ್ನು ನಿಪಿ-**1**(ಬಿ) ಎಂದು ಗುರುತಿಸಲಾಯಿತು.

ಸಾಕ್ಷಿ ಒಂದು ಪ್ರಥಮ ವರ್ತಮಾನ ವರದಿಯನ್ನು ನೋಡಿ ಅದರಲ್ಲಿರುವ ಒಂದು ಸಹಿಯನ್ನು ನೋಡಿ ತನ್ನ ಸಹಿ ಮತ್ತು ಸದರಿ ಪ್ರಥಮ ವರ್ತಮಾನ ವರದಿ ಯನ್ನು ಗುರುತಿಸಿದ್ದು, ಸದರಿ **ಪ್ರಥಮ ವರ್ತಮಾನ ವರದಿ ಯನ್ನು** ನಿಪಿ-**4** ಎಂದು, ಸಾಕ್ಷಿ ಸಹಿಯನ್ನು ನಿಪಿ-**4**(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲು: ಆರೋಪಿ ಪರ .ಕೆ.ಎಂ.ಜಿ. . ವಕೀಲರಿಂದಃ**

ಚಾ.ಸಾ. 1 ರವರು ನೀಡಿರುವ ಸುಳುವ್ಳ ದೂರನ್ನು ಸ್ವೀಕರಿಸಿಕೊಂಡು ಸುಳ್ಳು ಪ್ರಥಮ ವರ್ತಮಾನ ವರದಿಯನ್ನು ದಾಖಲಿಸಿಕೊಂಡಿದ್ದೇನೆ ಎಂದರೆ ಸರಿಯಲ್ಲ. ಚಾ.ಸಾ, 1 ರವರಿಗೆ ಪರಿಹಾರ ಹಣಕ್ಕೆ ಅನುಕೂಲವಾಗಲಿ ಎಂದು ಸುಳ್ಳು ಪ್ರಥಮ ವರ್ತಮಾನ ವರದಿಯನ್ನು ದಾಖಲಿಸಿಕೊಂಡಿದ್ದೇನೆ ಎಂದರೆ ಸರಿಯಲ್ಲ.

**ಮುಂದಿನ ಪಾಟೀಸವಾಲಿಗೆ ಆರೋಪಿ ಪರ ವಕೀಲರು ಸಮಯ ಕೋರಿದ್ದು, ಅವರ ಮನವಿಯನ್ನು ತಿರಸ್ಕರಿಸಲಾಯಿತು.**

**ಮರುವಿಚಾರಣೆ ಇಲ್ಲ.**

(ಸಾಕ್ಷಿಯ ವಿಚಾರಣೆಯನ್ನು ನಾನು ತೆರೆದ ನ್ಯಾಯಾಲಯದಲ್ಲಿ ಮದ್ಯಾಹ್ನ **3.40** ರವರೆಗೆ ಪಡೆದುಕೊಂಡಿರುತ್ತೇನೆ ಎಂದು ಧೃಢೀಕರಿಸುತ್ತೇನೆ)

ಓದಿ ಹೇಳಿ ಕೇಳಿ ಸರಿ ಇದೆ,

**ಮೂರನೇ ಅಪರ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆಎಂಎಫ್ ಸಿ., ಕನಕಪುರ.**